# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಮಲ್ಲಿಕಾರ್ಜುನ ವಿ.ಚಳಗೇರಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕೊಣ್ಣೂರ ಗ್ರಾಮ ಪಂಚಾಯತಿ, ನರಗುಂದ ತಾಲ್ಲೂಕು, ಗದಗ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 228 ಗ್ರಾಪಂಕಾ 2014, ದಿನಾಂಕ 26.08.2014
2) ಮಾನ್ಯ ಉಪಲೋಕಾಯುಕ್ತ ರವರ ವರದಿ ಸಂಖ್ಯೆ: LOK/INQ/14-A/495/2014/ARE-7, ದಿನಾಂಕ: 14.06.2017
3) ಸರ್ಕಾರದ ಸಮಸಂಖ್ಯೆಯ ಎರಡನೇ ಕಾರಣ ಕೇಳಿ ನೋಟೀಸ್, ದಿನಾಂಕ 23.06.2017
4) ಶ್ರೀ ಮಲ್ಲಿಕಾರ್ಜುನ ವಿ.ಚಳಗೇರಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕೊಣ್ಣೂರ ಗ್ರಾಮ ಪಂಚಾಯತಿ, ನರಗುಂದ ತಾಲ್ಲೂಕು, ಗದಗ ಜಿಲ್ಲೆ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ, ದಿನಾಂಕ 21.08.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ, ಕೊಣ್ಣೂರ ಗ್ರಾಮ ಪಂಚಾಯತಿ, ನರಗುಂದ ತಾಲ್ಲೂಕು, ಗದಗ ಜಿಲ್ಲೆ ಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಶ್ರೀ ಮಲ್ಲಿಕಾರ್ಜುನ ವಿ.ಚಳಗೇರಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರು ದೂರುದಾರರ ಆಸ್ತಿಯಲ್ಲಿ ಇದ್ದ ಚರಂಡಿಯನ್ನು ಮುಚ್ಚಲು ನಿಯಮಬಾಹಿರ ಕ್ರಮವಹಿಸಿದ ಆರೋಪದ ಮೇಲೆ ಶ್ರೀ ಮಲ್ಲಿಕಾರ್ಜುನ ವಿ.ಚಳಗೇರಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕೊಣ್ಣೂರ ಗ್ರಾಮ ಪಂಚಾಯತಿ, ನರಗುಂದ ತಾಲ್ಲೂಕು, ಗದಗ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ದಿನಾಂಕ 26.08.2014 ರ ಸರ್ಕಾರದ ಆದೇಶದಲ್ಲಿ ಕ.ನಾ.ಸೇ.ನಿ.1957 ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು. ಸದರಿ ಪ್ರಕರಣದ ಕುರಿತು ವಿಚಾರಣೆ ನಡೆಸಲಾಗಿ, ಕೆಳಕಂಡ ಆರೋಪಗಳು ಸಾಬೀತಾಗಿರುತ್ತವೆಂದು ಮಾನ್ಯ ಉಪಲೋಕಾಯುಕ್ತ ವರದಿಯಲ್ಲಿ ತಿಳಿಸಿರುತ್ತಾರೆ.

Though the notice was given to the complainant to clear the drain within 7 days and notice was sent on 26.12.2011, but served on 29.12.2011, without waiting for the expiry of the period of 7 days given, DGO had taken action to clear the drain on 03.01.2012, i.e., 2 days prior to the expiry of that period given.

As per section 75(iv) of KPR Act, the panchayat is permitted to carry out such work only after the land owner or occupier does not comply with the written notice to remove the obstruction within the period mentioned in the notice;

But, DGO had taken step to clear the drain before the expiry of period mentioned in the notice, and that act of DGO was illegal, improper and aginst the law and procedure.

ಮೇಲೆ ಓದಲಾದ (2) ರಲ್ಲಿ, ಆರೋಪಗಳು ಸಾಬೀತಾಗಿರುವುದರಿಂದ ಶ್ರೀ ಮಲ್ಲಿಕಾರ್ಜುನ ವಿ.ಚಳಗೇರಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರ ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಿರುತ್ತಾರೆ.

ಮುಂದುವರೆದಿದೆ..

ಮೇಲೆ ಓದಲಾದ (3) ರಲ್ಲಿ ನಿಯಮಾನುಸಾರ ಆರೋಪಿತ ನೌಕರರಿಗೆ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು ಈ ನೋಟಿಸಿಗೆ ಸದರಿ ನೌಕರರು ಮೇಲೆ ಓದಲಾದ (4) ರಲ್ಲಿ ಸದರಿ ನೌಕರರು ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಸರ್ಕಾರವು ಪರಿಶೀಲಿಸಿ, ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸಿನಲ್ಲಿ ಎತ್ತಿರುವ ಆಕ್ಷೇಪಣೆಗಳಿಗೆ ಸಂಬಂಧ ಪಟ್ಟಂತೆ ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ ಹಾಗೂ ಸದರಿ ನೌಕರರುಗಳ ವಿರುದ್ಧದ ಆರೋಪವು ಸಾಬೀತಾಗಿರುವುದೆಂದು ನಿರ್ಣಯಿಸಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿದೆ. ಆದುದರಿಂದ ಆಪಾದಿತರ ಆಕ್ಷೇಪಣೆಗಳು ಸಮಂಜಸವಾಗಿ ಇರುವುದಿಲ್ಲವಾದ್ದರಿಂದ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಂತೆ ಸದರಿ ನೌಕರರುಗಳಿಗೆ ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿನ ಶಿಫಾರಸ್ಸಿನಂತೆ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 535 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 09.11.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, 1957 ರನ್ವಯ ಶ್ರೀ ಮಲ್ಲಿಕಾರ್ಜುನ ವಿ.ಚಳಗೇರಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕೊಣ್ಣೂರ ಗ್ರಾಮ ಪಂಚಾಯತಿ, ನರಗುಂದ ತಾಲ್ಲೂಕು, ಗದಗ ಜಿಲ್ಲೆ (ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ, ರೋಣ ತಾಲ್ಲೂಕು ಪಂಚಾಯತಿ, ಗದಗ ಜಿಲ್ಲೆ) ಇವರಿಗೆ ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಗದಗ ಜಿಲ್ಲಾ ಪಂಚಾಯತಿ, ಗದಗ.
5) ಸರ್ಕಾರದ ಅಧೀನ ಕಾರ್ಯದರ್ಶಿಗಳು(ಸೇವೆಗಳು ಬಿ ಮತ್ತು ಸಿ), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
6) ಕಾರ್ಯನಿರ್ವಾಹಕ ಅಧಿಕಾರಿ, ನರಗುಂದ ತಾಲ್ಲೂಕು ಪಂಚಾಯತಿ, ನರಗುಂದ, ಗದಗ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವಂತೆ ಕೋರಿದೆ.)
7) ಶ್ರೀ ಮಲ್ಲಿಕಾರ್ಜುನ ವಿ.ಚಳಗೇರಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕೊಣ್ಣೂರ ಗ್ರಾಮ ಪಂಚಾಯತಿ, ನರಗುಂದ ತಾಲ್ಲೂಕು, ಗದಗ ಜಿಲ್ಲೆ. (ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ, ರೋಣ ತಾಲ್ಲೂಕು ಪಂಚಾಯತಿ, ಗದಗ ಜಿಲ್ಲೆ)
8) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.